ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1358
ಉತ್ತರಿಸುವ ದಿನಾಂಕ	18–03–2020
ಮಾನ್ಯ ಸದಸ್ಯರ ಹೆಸರು	ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ಸಚಿವರು	ಕಂದಾಯ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ನೋಂದಣಾಧಿಕಾರಿಗಳು ಹಾಗೂ ಉಪ ನೋಂದಣಾಧಿಕಾರಿಗಳ ಕಛೇರಿಗಳು ಎಷ್ಟು;	ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ನೋಂದಣಿ ಕಛೇರಿಗಳು 34 ಮತ್ತು ಉಪ ನೋಂದಣಿ ಕಛೇರಿಗಳು 252
ಆ	ಇದರಲ್ಲಿ ಸ್ವಂತ ಕಟ್ಟಡಗಳಿರುವ ಕಛೇರಿಗಳೆಷ್ಟು; ಬಾಡಿಗೆ ಕಟ್ಟಡದಲ್ಲಿ ಕೆಲಸ ನಿರ್ವಹಿಸುತ್ತಿರುವ ಕಟ್ಟಡಗಳೆಷ್ಟು; (ವಿವರ ನೀಡುವುದು)	ಪ್ರಸ್ತುತ ಸರ್ಕಾರದ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಛೇರಿಗಳ ಸಂಖ್ಯೆ –175 ಪ್ರಸ್ತುತ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಛೇರಿಗಳ ಸಂಖ್ಯೆ –111 ವಿವರಗಳನ್ನು ಅನುಬಂಧದಲ್ಲಿ ಸಲ್ಲಿಸಲಾಗಿದೆ.
ಇ	ಎಲ್ಲಾ ಕಛೇರಿಗಳಿಗೂ ಸರ್ಕಾರಿ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?	ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು ದಿನಾಂಕ:21–10–2019ರಂದು ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರಿಗೆ ಪತ್ರ ಬರೆದು ಬೆಂಗಳೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ನೋಂದಣಿ ಕಛೇರಿಗಳ ಮತ್ತು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನೋಂದಣಿ ಕಛೇರಿಗಳಿಗೆ ಕಟ್ಟಡ ನಿರ್ಮಾಣಕ್ಕಾಗಿ ಸಿಎ ನಿವೇಶನಗಳನ್ನು ಗುರುತಿಸಿ ಮಂಜೂರು ಮಾಡುವಂತೆ ಕೋರಿ ಪತ್ರ ಬರೆದಿರುತ್ತಾರೆ. ಅದರಂತೆ, ದಿನಾಂಕ:10–01–2018ರ ಪತ್ರದಲ್ಲಿ, ರಾಜ್ಯದ ಎಲ್ಲಾ ಜಿಲ್ಲಾ ನೋಂದಣಾಧಿಕಾರಿಗಳಿಗೆ ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳು ಮತ್ತು ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ನಿವೇಶನಗಳ ಮಂಜೂರಾತಿಗಾಗಿ ಪ್ರಸ್ತಾವನೆಗಳನ್ನು ಸಲ್ಲಿಸಿ, ಸೂಕ್ತ ನಿವೇಶನಗಳ ಮಂಜೂರಾತಿ ಪಡೆಯಲು ಅವಶ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿರುತ್ತಾರೆ. ಸೂಕ್ತ ನಿವೇಶನಗಳನ್ನು ಸಂಬಂಧಪಟ್ಟ ಪ್ರಾಧಿಕಾರದವರು ಮಂಜೂರು ಮಾಡಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ ಹಂಚಿಕೆ ಮಾಡಿದ್ದಲ್ಲಿ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಕ್ರಮಗಳನ್ನು ಕೈಗೊಳ್ಳಲಾಗುವುದು.

ಸಂಖ್ಯೆ: ಕಂಇ/58/ಎಂಎನ್ಎಸ್ಎ/2020

(ಆರ್.ಅಶೋಕ್)
ಕಂದಾಯ ಸಚಿವರು